ದಿನಾಂಕ 15-09-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀ ಎಂ.ಎಸ್.ಹೆಚ್ ವಕೀಲರಿಂದಃ**

1. ಈ ದಾವೆಯನ್ನು ಯಾರು ಯಾರ ಮೇಲೆ ಸಲ್ಲಿಸಿದ್ದಾರೆಂದು ಗೊತ್ತಿಲ್ಲ. ದಾವಾ ಆಸ್ತಿಯು ಸ ನಂಃ 3 ರ ಜಮೀನಿನಲ್ಲಿ ಇದೆ. ದಾವಾ ಆಸ್ತಿಯ ವಿಸ್ತೀರ್ಣ 1 ಎಕರೆ 33 ಗುಂಟೆ ಇದ್ದು ಅದರ ಫೂಟು ಹಿಸ್ಸಾ ಇದೆಯೋ ಅಥವಾ ಇಲ್ಲವೋ ಗೊತ್ತಿಲ್ಲ. ದಾವಾ ಆಸ್ತಿಯನ್ನು ಬಹಿರಂಗ ಹರಾಜಿನಲ್ಲಿ ಶೇಖ ಮೆಹಬೂಬಅಲಿ ಖರೀದಿಸಿರುತ್ತಾರೆ. ಸದರಿಯವರು ಬಹಿರಂಗ ಹರಾಜಿನಲ್ಲಿ ದಾವಾ ಆಸ್ತಿಯನ್ನು ಖರೀದಿಸುವ ವ್ಯವಹಾರ ಮತ್ತು ಪ್ರಕ್ರಿಯೆಯಲ್ಲಿ ನಾನು ಭಾಗವಹಿಸಿರಲಿಲ್ಲ. ನನಗೆ ಪ್ರತಿವಾದಿಯ ಪರಿಚಯ ಇರುವುದಿಲ್ಲ. ಮೆಹಬೂಬಅಲಿ ರವರು ದಾವಾ ಆಸ್ತಿಯನ್ನು ಹರಾಜಿನಲ್ಲಿ ತೆಗೆದು ಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

2. ವಾದಿ ಮತ್ತು ಪ್ರತಿವಾದಿಗಳ ಆಸ್ತಿಗಳು ಅಕ್ಕ ಪಕ್ಕದಲ್ಲಿ ಇರುವವೋ ಅಥವಾ ಇಲ್ಲವೋ ನನಗೆ ಗೊತ್ತಿಲ್ಲ. ಪ್ರತಿವಾದಿಗೆ ಸೇರಿದ 2 ಎಕರೆ ಜಮೀನು ಇದೆ ಎಂದರೆ ಸರಿ. ಸದರಿ 2 ಎಕರೆ ಜಮೀನನ್ನು ಪ್ರತಿವಾದಿಯೇ ವಹಿವಾಟು ಮಾಡುತ್ತಾರೆ ಎಂದರೆ ಸರಿ. ವಾದಿಯು ಪ್ರತಿವಾದಿಯ ಮೇಲೆ ಸುಳ್ಳು ದಾವೆಯನ್ನು ಸಲ್ಲಿಸಿದ್ದು, ವಾದಿಯ ಮಾತನ್ನು ಕೇಳಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು ವಹಿವಾಟು ಮಾಡಲು ಪ್ರತಿವಾದಿಯು ತೊಂದರೆ ನೀಡುತ್ತಿಲ್ಲ ಎಂದರೆ ಸರಿ. ನನಗೆ ದಾವಾ ಆಸ್ತಿಯ ಬಗ್ಗೆ ಮತ್ತು ದಾವೆಯ ಬಗ್ಗೆ ಯಾವುದೇ ಸಂಗತಿಗಳು ಗೊತ್ತಿಲ್ಲದೇ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ